ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮತ್ತು ಆ) ಆರೋಗ್ಯ ಕವಚ ಕಾರ್ಯಕ್ರಮದಡಿಯಲ್ಲಿ ಕರ್ನಾಟಕದಾದ್ಯಂತ 517 ಆಂಬ್ಯುಲೆನ್ಸ್‌ಗಳನ್ನು ಒದಗಿಸಲಾಗಿದೆ.

ಈ ಯೋಜನೆಗಾಗಿ ರಾಜ್ಯ ಸರ್ಕಾರದ ಆಯವ್ಯಯದಿಂದ ಇದುವರೆಗೆ (ಫೆಬ್ರವರಿ 2010 ರ ಅಂತ್ಯದವರೆಗೆ) ಒಟ್ಟು ರೂ. 20 ಕೋಟಿಗಳು, 12 ನೇ ಹಣಕಾಸು ಆಯೋಗದಿಂದ ಹಂಚಿಕೆಯಾದ ರಾಜ್ಯದ ಪಾಲು ರೂ. 86.25 ಕೋಟಿಗಳು ಮತ್ತು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ವತಿಯಿಂದ ರೂ.6.25 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ.

ಇ) ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದಿಂದ ಇದುವರೆಗೆ ರೂ. 6.25 ಕೋಟಿಗಳನ್ನು (ಫೆಬ್ರವರಿ 2010ರ ಅಂತ್ಯದವರೆಗೆ) ಉಪಯೋಗಿಸಿಕೊಳ್ಳಲಾಗಿದೆ.

ಈ) ಮತ್ತು ಉ) ಆರೋಗ್ಯ ಕವಚ ಯೋಜನೆಯು ರಾಜ್ಯ ಸರ್ಕಾರವು ರೂಪಿಸಿರುವ ಯೋಜನೆಯಾಗಿದ್ದು, ಕರ್ನಾಟಕ ಪಾರದರ್ಶಕತೆ ಅಧಿನಿಯಮ ಮತ್ತು ಅದರಡಿ ರಚಿತವಾದ ನಿಯಮಗಳನ್ನು ಅನುಸರಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಇದು ರಾಜ್ಯ ಸರ್ಕಾರದ ಯೋಜನೆಯಾಗಿರುವ ಹಿನ್ನೆಲೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರ ಹಾಗೂ ಮಾನ್ಯ ಆರೋಗ್ಯ ಸಚಿವರ ಭಾವಚಿತ್ರವನ್ನು ಆಂಬ್ಯುಲೆನ್ಸ್‌ಗಳ ಮೇಲೆ ಪ್ರದರ್ಶಿಸಲಾಗುತ್ತಿದೆ. ಇಲ್ಲಿ ಶಿಷ್ಟಾಚಾರದ ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ಉಪ್ಪಾರ ಜಾತಿಯನ್ನು ಪರಿಶಿಷ್ಟ ಜಾತಿಗೆ ಸೇರಿಸುವುದು

883 (153) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕದಲ್ಲಿ ಒಟ್ಟು ಉಪ್ಪಾರ ಸಮಾಜದ ಜನಸಂಖ್ಯೆ ಎಷ್ಟು;

ಆ) ಅವರು ಆಧರಿಸುವ ಪ್ರಧಾನ ಉದ್ಯೋಗ ಯಾವುವು;

ಇ) ಉಪ್ಪಾರ ಸಮಾಜವನ್ನು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡವೆಂದು ಗುರುತಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ;

ಈ) ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳಿಸುವ ಬಗ್ಗೆ ಪ್ರಯತ್ನ ನಡೆದಿದೆಯೇ?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಎರಡನೇ ಹಿಂದುಳಿದ ವರ್ಗಗಳ ಆಯೋಗವು 1984ನೇ ಸಾಲಿನಲ್ಲಿ ನಡೆಸಿದ ಸಮೀಕ್ಷೆ ಪ್ರಕಾರ 4,72,968.

ಆ) ವಂಶಪಾರಂಪರ್ಯವಾಗಿ ಉಪ್ಪಿನ ತಯಾರಿಕೆ.

ಇ) ಇಲ್ಲ.

ಈ) ಇಲ್ಲ.

ಮೊರಾರ್ಜಿ ವಸತಿ ಶಾಲೆ ಪ್ರಾರಂಭಿಸುವುದು

884 (1135) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ಕ್ಷೇತ್ರದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಅಸ್ತಿತ್ವದಲ್ಲಿ ಇರುವುದು ಯಾವ ಸ್ಥಳದಲ್ಲಿ;

ಆ) ಈಗಾಗಲೇ ಅಸ್ತಿತ್ವ ಇದ್ದಲ್ಲಿ ಸರ್ಕಾರದ ಆದೇಶ ಒದಗಿಸಬಹುದೇ?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹಿಪ್ಪರಗಿ.

ಆ) ಸರ್ಕಾರದ ಆದೇಶ ಸಂಖ್ಯೆ : ಸಕಇ 189 ಪಕವಿ 97, ದಿನಾಂಕ: 03–09–1996 ರ ಪ್ರತಿ ಒದಗಿಸಿದೆ.